# ಹಂಪಿ ಟೈಮ್ಸ್

HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA
Email: hampitimes@gmail.com | M:94486 33038

ಸಂಪುಟ:02 • ಸಂಚಿಕೆ: 70 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 10.09.2024 • ಮಂಗಳವಾರ • ಪುಟ:04 • ಬೆಲೆ:2
Volume:02 • Issue: 70 • PRGI No:KARKAN/2023/88055 • VIJAYANAGARA • 10.09.2024 • Tuesday • Page:04 • Rs:2



HAMPI TIMES No.1 Leading Local News Paper
85,000 E-PAPER READERS
94486 33038 NEWS PAPER ADD - THE BEST ADVERTISING PLATFORM TO BOOST YOUR BUSINESS
E-mail: hampitimes@gmail.com | # Valmiki Circle hospet-583201



ಮನಸ್ಸು ಮಾಡು ಕರ್ತವ್ಯ ನಿಷ್ಠನಾಗು ಕಾದು ನೋಡು

ಪುಟ: 4ರಲ್ಲಿ ನೋಡಿ

ಈ ಬಾರಿ SSLC ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ!
ವಿದ್ಯಾರ್ಥಿಗಳು ಹೆಚ್ಚು ಅಂಕಗಳಿಸಲು ಸುಲಭ ಮಾರ್ಗೋಪಾಯಗಳು
ದಿನಕ್ಕೊಂದು ವಿಷಯ ಹಂಪಿ ಟೈಮ್ಸ್ ಮಾರ್ಗದರ್ಶಿಯಲ್ಲಿ
SSLC ಪರೀಕ್ಷೆ ವಂಚಿತರು, ಆಕಾಂಕ್ಷಿಗಳು ಹಂಪಿ ಟೈಮ್ಸ್ ದಿನಪತ್ರಿಕೆಯಲ್ಲಿನ ದಿನಕ್ಕೊಂದು ವಿಷಯಗಳನ್ನು ಓದಿಕೊಂಡು ಪರೀಕ್ಷೆಗೆ ಸಿದ್ಧಗೊಳ್ಳಲು ಹಂಪಿ ಟೈಮ್ಸ್ ಮಾರ್ಗದರ್ಶಿ ಸಹಕಾರಿಯಾಗಲಿದೆ... ಇ-ಪೇಪರ್‌ನಲ್ಲೂ ಲಭ್ಯ...
ಹಂಪಿ ಟೈಮ್ಸ್ ಇ-ಪೇಪರ್
94486 33038 | www.hampitimes.com / epaper.hampitimes.com | Vijayanagara | hampitimes@gmail.com


## ಮೈಕ್ರೋ ನ್ಯೂಸ್

### ಆಸ್ತಿ ತೆರಿಗೆ ಪಾವತಿ ರಿಯಾಯಿತಿ ಅವಧಿ ವಿಸ್ತರಣೆ

**ಹಂಪಿ ಟೈಮ್ಸ್ ಬಳ್ಳಾರಿ**

ಪ್ರಸಕ್ತ ಸಾಲಿನ ಆಸ್ತಿ ತೆರಿಗೆ ಪಾವತಿ ಹೆಚ್ಚಿಸಲು ಸಾರ್ವಜನಿಕರಿಗೆ ಸ್ವಯಂ ತೆರಿಗೆ ಕಟ್ಟಲು ಉತ್ತೇಜಿಸುವ ನಿಟ್ಟಿನಲ್ಲಿ ಪ್ರಸ್ತಕ ಆರ್ಥಿಕ ವರ್ಷದ 30 ದಿನಗಳೊಳಗಾಗಿ ಪೂರ್ಣ ಪ್ರಮಾಣ ತೆರಿಗೆ ಪಾವತಿಸಿದ್ದಲ್ಲಿ ಶೇ.05 ರಷ್ಟು



ರಿಯಾಯಿತಿ ನೀಡುವ ಅವಧಿಯನ್ನು ಸೆ.14ರ ವರೆಗೆ ವಿಸ್ತರಿಸಲಾಗಿದೆ.

ಸೆ.14 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಹಿನ್ನಲೆಯಲ್ಲಿ ಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಡುವ ತೆರಿಗೆದಾರರು ನಿಗದಿತ ಅವಧಿಯಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿಸುವ ಈ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಆಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

### ಉದ್ಯಮಶೀಲತಾ ಅಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ವತಿಯಿಂದ ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಿಡಾಕ್‌ನ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

**ಅರ್ಹತೆಗಳು:** 18 ವರ್ಷ ದಿಂದ 45 ವರ್ಷ. ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಪರಿಶಿಷ್ಟ ಪಂಗಡ ಮಹಿಳೆಯರಿಗೆ ಮಾತ್ರ ಅವಕಾಶವಿದ್ದು, ಓದಲು, ಬರೆಯಲು ಬರುತ್ತಿರಬೇಕು. ಆಸಕ್ತ ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳು ಅರ್ಜಿಯನ್ನು ಕಚೇರಿಯಿಂದ ಪಡೆದು ಭರ್ತಿ ಮಾಡಿ ಸಲ್ಲಿಸಬಹುದು ಅಥವಾ ದೂರವಾಣಿ ಮೂಲಕ ನೋಂದಾಯಿಸಿ ಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿ ಕಟ್ಟಡದ ಸಿಡಾಕ್‌ನ ಜಂಟಿ ನಿರ್ದೇಶಕರ ಕಚೇರಿ ಅಥವಾ ಮೊ:7483538942, 9449226221 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

### ಸೆ.13 ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

**ಹಂಪಿ ಟೈಮ್ಸ್ ಕೊಪ್ಪಳ**

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಸೆಪ್ಟೆಂಬರ್ 13ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸಲಿದ್ದು, ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ. ಎಸ್.ಎಸ್.ಎಲ್.ಸಿ., ಪಿ.ಯು.ಸಿ ಮತ್ತು ಇತರೆ ಪದವಿ ಅಭ್ಯರ್ಥಿಗಳಿಗೆ ನೇರ ಸಂದರ್ಶನ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ತನು ಮನ ಭಾವ ನುಡಿ ನಡೆ ಶುದ್ಧವಿರಲಿ
# ಪಂಚಶುದ್ಧಿಯುಳ್ಳವರು ಗುರುವಾಗಲು ಸಾಧ್ಯ

## ಡಿಸಿ ಎಂ.ಎಸ್.ದಿವಾಕರ ಹೇಳಿಕೆ । ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ । ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ

## ಶಿಕ್ಷಕ ಗುರುವಾಗಬೇಕು । ಜೀವನ ನಡೆಸಲು ಕೈತುಂಬ ವೇತನವಿದೆ । ಮಕ್ಕಳ ಶೈಕ್ಷಣಿಕ ಪ್ರಗತಿಗೆ ಚಿತ್ತಹರಿಸಿ

**ಹಂಪಿ ಟೈಮ್ಸ್ ಹೊಸಪೇಟೆ**

ತನು ಮನ ಭಾವ ನುಡಿ ನಡೆ ಎಂಬ ಪಂಚಶುದ್ಧವುಳ್ಳ ಶಿಕ್ಷಕರು ಮಕ್ಕಳ ಪಾಲಿಗೆ ಗುರುವಾಗಲು ಸಾಧ್ಯ. ಆರೋಗ್ಯಂತ, ಕಳಂಕರಹಿತ, ಸದ್ಭಾವನೆಯುಳ್ಳ ನುಡಿದಂತೆ ನಡೆಯುವ ಶಿಕ್ಷಕರಾದಾಗ ಮಾತ್ರ ಮಕ್ಕ ಳಲ್ಲಿ ಧನಾತ್ಮಕ ಬದಲಾವಣೆ ಕಾಣಬಹುದು. ಶಿಕ್ಷಕ ಕೇವಲ ಶಿಕ್ಷಕನಾಗಿರದೆ ಗುರುವಾಗಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಹೇಳಿದರು.

ನಗರದ ಸಾಯಿಲೀಲಾ ರಂಗ ಮಂದಿರದಲ್ಲಿ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ, ಹಮ್ಮಿಕೊಂಡಿದ್ದ ಡಾ॥ ಸರ್ವಪಲ್ಲಿ ರಾಧಕೃಷ್ಣನ್ ಅವರ 136ನೇ ಜನ್ಮ ದಿನಾಚರಣೆ, ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸೋಮವಾರ ಮಾತನಾಡಿದರು. ಈ ಹಿಂದೆ ಶಿಕ್ಷಕರಲ್ಲಿ ಪಂಚಶುದ್ಧಿಯನ್ನು ಕಾಣುತ್ತಿದ್ದೆವು. ಶಿಕ್ಷಕರು ಆರೋಗ್ಯವಂತರಾಗಿ, ಕಳಂಕರಹಿತರಾಗಿ, ಬಾಲಕಿಯರನ್ನು, ಮಹಿಳೆಯರನ್ನು ಶುದ್ಧಬಾವನೆಯಿಂದ ಕಾಣುವುದು, ನುಡಿದಂತೆ ನಡೆಯುತ್ತಿದ್ದರು. ಅಂದು ಇಂದಿನಂತೆ ಸೌಲಭ್ಯಗಳಿಲ್ಲದಿದ್ದರೂ ಒಬ್ಬ ಶಿಕ್ಷಕ ಎಲ್ಲಾ ವಿಷಯಗಳನ್ನು ಕಲಿಸಿ ಮಕ್ಕಳ ಪಾಲಿಗೆ ಗುರುವಾಗಿದ್ದರು. ಅಂದಿನ ಗುರುವಿನ ಗುಣಗಳನ್ನು ಇಂದಿನ ಶಿಕ್ಷಕರಲ್ಲಿ ಕಾಣುವುದು ಅಪರೂಪವಾಗಿದೆ. ಶಿಕ್ಷಕರಾದವರು ತನು ಮನ ಭಾವ ನುಡಿ ನಡೆ ಪಂಚಶುದ್ಧಿಗಳನ್ನು ಅಳವಡಿಸಿಕೊಳ್ಳಬೇಕು. ಶಿಕ್ಷಕ ವೃತ್ತಿ ಎಲ್ಲಾ ವೃತ್ತಿಗಳಿಗಿಂತಲೂ ಶ್ರೇಷ್ಠ. ಎಲ್ಲಾ ಕ್ಷೇತ್ರದಲ್ಲಿ ಕೆಲಸ ಮಾಡುವ ಸಾಮರ್ಥ್ಯವುಳ್ಳ ಮಕ್ಕಳನ್ನು ಸೃಷ್ಠಿ ಮಾಡುವ ಶಕ್ತಿ ಶಿಕ್ಷರಲ್ಲಿ ಮಾತ್ರವಿದೆ. ಇನ್ನಾವುದೇ ಉದ್ಯೋಗದಲ್ಲಿರುವವರಿಗೆ ಅದು ಸಾಧ್ಯವಿಲ್ಲ. ಶಿಕ್ಷಕರು ಆತ್ಮಾವಲೋಕನ ಮಾಡಿಕೊಳ್ಳಬೇಕು. ಇಂದು ಉತ್ತಮ ವೇತನ ದೊರೆಯುತ್ತಿದೆ. ಜಿಲ್ಲೆಯಲ್ಲಿ 2.57 ಲಕ್ಷ ವಿದ್ಯಾರ್ಥಿಗಳಿದ್ದಾರೆ. ಎಲ್ಲಾ ಮಕ್ಕಳಿಗೆ ನಾವು ನ್ಯಾಯ ಒದಗಿಸುತ್ತಿದ್ದೇವೆಯೇ?, ಎಲ್ಲಾ ಸೌಲಭ್ಯಗಳ ನಡುವೆ ಕಲಿಸುವವರಿಗಿಂತ, ಸೌಲಭ್ಯಗಳ ಕೊರತೆಯ ನಡುವೆ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವವರೇ ಶ್ರೇಷ್ಠರೆಂದೆನಿಸಿಕೊಳ್ಳುತ್ತಾರೆ. ಶಿಕ್ಷಕರು ಸಕ್ರಿಯವಾಗಿ ತಮ್ಮ ವೃತ್ತಿಯಲ್ಲಿ ತೊಡಗಿಸಿಕೊಂಡು ಎಸ್ಸೆಸ್ಸೆಲ್ಸಿ ಶೇಕಡವಾರು ಫಲಿತಾಂಶವನ್ನು ಹೆಚ್ಚಿಸುವ ಹೊಣೆಗಾರಿಗೆ ಶಿಕ್ಷಕರ ಮೇಲಿರುವುದನ್ನು ಮರೆಯದೆ ಕಾರ್ಯನಿರ್ವಹಸಬೇಕು ಎಂದು ಹೇಳಿದರು.





> ಇತ್ತೀಚೆಗೆ ನಗರದ ಪ್ರದೇಶದಲ್ಲಿ ಶಾಲೆಗೆ ಭೇಟಿ ನೀಡಿದಾಗ ಸಕಾಲಕ್ಕೆ ಶಾಲೆಗೆ ಬರದ ಶಿಕ್ಷಕರನ್ನು ಅಮಾನತ್ತುಗೊಳಿಸಿದ್ದೇನೆ. ಅಲಕ್ಷ್ಯ, ಕರ್ತವ್ಯ ನಿರ್ಲಕ್ಷ್ಯವನ್ನು ಎಂದೂ ಸಹಿಸಿಕೊಳ್ಳುವುದಿಲ್ಲ. ಸಹಿಸಿಕೊಂಡರೆ, ಕೆಲಸ ಮಾಡುವವರಿಗೂ, ಕೆಲಸ ಮಾಡದವರಿಗೂ ಏನೂ ವ್ಯತ್ಯಾಸ ಇರುವುದಿಲ್ಲ. ಹಾಗಾಗಿ ಶಿಕ್ಷಕರನ್ನು ಅಮಾನತ್ತುಗೊಳಿಸಲಾಯಿತು. ಇಂತಹ ಘಟನೆಗಳು ಮರುಕಳಿಸದಂತೆ ಶಿಕ್ಷಕರು ಎಚ್ಚರವಹಿಸಬೇಕು. – **ಎಂ.ಎಸ್.ದಿವಾಕರ** ಜಿಲ್ಲಾಧಿಕಾರಿ, ವಿಜಯನಗರ



ಜಿಲ್ಲಾ ಪಂ.ಸಿಇಒ ಎನ್.ಎಮ್.ಅಕ್ರಮ್ ಅಲಿ ಷಾ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಕರಿಲ್ಲದೆ ಶಿಕ್ಷಣ ಕಲಿಯುವುದು ಅಸಾಧ್ಯ. ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮಾಡಬೇಕೆಂದರೆ ಗುರುವಿನ ಆಶೀರ್ವಾದ ಅಗತ್ಯ. ಗುರುಗಳ ಮಾರ್ಗದರ್ಶನದಲ್ಲಿ ನಡೆದರೆ ಗುರಿ ಸೇರುವುದು ನಿಶ್ಚಿತ. ಕಳೆದ ಬಾರಿ 10ನೇ ತರಗತಿ ಫಲಿತಾಂಶ ಕುಸಿದಿರುವುದಕ್ಕೆ ಪ್ರತಿಯೊಬ್ಬರು ಸಕ್ರಿಯವಾಗಿ ತೊಡಗಿಸಿ ಕೊಳ್ಳದಿರುವುದು ಕಾರಣ. ಈ ಬಾರಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನಾನಾ ಯೋಜನೆಗಳನ್ನು ರೂಪಿಸಲಾಗಿದ್ದು, ಅವುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಉತ್ತಮ ಫಲಿತಾಂಶ ಶಿಕ್ಷಕರು ನೀಡುತ್ತಾರೆ ಎಂಬ ಆಶಾಭಾವನೆ ಹೊಂದಿದ್ದೇವೆ ಎಂದರು.

> ಶಾಲೆಗಳ ಅಭಿವೃದ್ಧಿ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸಲು ಬದ್ಧನಾಗಿದ್ದೇನೆ. ಶೈಕ್ಷಣಿಕ ಪ್ರಗತಿಯಾದರೆ ಬಡತನ ನಿರ್ಮೂಲನೆಯಾಗಲಿದೆ.
> – **ಎಚ್.ಆರ್.ಗವಿಯಪ್ಪ,** ಶಾಸಕ, ವಿಜಯನಗರ

> ಸರ್ಕಾರಿ ಶಾಲೆಗಳು ಇಲ್ಲದ ಮಣಿಪುರದಲ್ಲಿ ಓದಿದ್ದೇನೆ. ಆದರೆ ಕರ್ನಾಟದಲ್ಲಿ ಸಾಕಷ್ಟು ಸರ್ಕಾರಿ ಶಾಲೆಗಳಿದ್ದು, ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತಲಿದೆ. ಆದರೆ ಅವುಗಳಿಗೆ ತಕ್ಕಂತೆ ನಾವು ಶಿಕ್ಷಣ ನೀಡುತ್ತಿದ್ದೇವೆಯೇ ಎಂಬುದನ್ನು ಶಿಕ್ಷಕರು ಆತ್ಮಾವಲೋಕನ ಮಾಡಿಕೊಳ್ಳಬೇಕಾದ ಸಂದರ್ಭ ಬಂದೊದಗಿದೆ.
> – **ಎನ್.ಎಮ್. ಅಕ್ರಮ್ ಅಲಿ ಷಾ,** ಜಿಪಂ ಸಿಇಒ

ಶಾಸಕ ಎಚ್.ಆರ್.ಗವಿಯಪ್ಪ ಅಧ್ಯಕ್ಷತೆವಹಿಸಿದ್ದರು. ಹುಡಾ ಅಧ್ಯಕ್ಷ ಎನ್.ಎನ್.ಮಹ್ಮದ್ ಇಮಾಮ್ ನಿಯಾಜಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕುರಿ ಶಿವಮೂರ್ತಿ. ಮಾತನಾಡಿದರು.

ಡಿಡಿಪಿಐ ಎ.ಹನುಮಕ್ಕ ಮಾತನಾಡಿ, ನಮಗೆ ಕಲಿಸಿದ ಶಿಕ್ಷಕರನ್ನು ನೆನೆದರೆ ಕಣ್ಣು ತೇವವಾಗುತ್ತವೆ. ಅವರ ಸಮಯಪ್ರಜ್ಞೆ, ಮಕ್ಕಳ ಮೇಲೇ ತೋರುತ್ತಿದ್ದ ಕಾಳಜಿ ಇಂದಿಗೂ ಮರೆಯಲಾರೆವು. ಅವರು ಕೇವಲ ಶಿಕ್ಷಕರಾಗದೆ ಗುರುವಾಗಿದ್ದರು. ಇಂದು ಶಿಕ್ಷಕರು ಶಿಕ್ಷಕರಾಗಿ ಉಳಿಯದೇ, ಗುರುಗಳಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರು ತಮ್ಮ ಬೇಡಿಕೆಗಳನ್ನು ಶಾಸಕರಿಗೆ ಹಾಗೂ ಜಿಲ್ಲಾಧಿಕಾರಿಗೆ ಸಲ್ಲಿಸಿದರು.

ಬಿಇಒ ಎಂ.ಚನ್ನಬಸಪ್ಪ ಸ್ವಾಗತಿಸಿದರು. ಜಿಲ್ಲಾ, ತಾಲೂಕು ಸಂಘಟನೆಯ ಪದಾಧಿಕಾರಿಗಳು ಇದ್ದರು. ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

# ಅಭಿವೃದ್ಧಿ ಪತ್ರಿಕೋದ್ಯಮ, ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಆಹ್ವಾನ

## ಅರ್ಹ ಪತ್ರಕರ್ತರನ್ನು,ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು । ವೈಯುಕ್ತಿಕವಾಗಿಯೂ ಸ್ವಯಂ ಅರ್ಜಿ ಸಲ್ಲಿಸಬಹುದು

**ಹಂಪಿ ಟೈಮ್ಸ್ ಹೊಸಪೇಟೆ**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರು / ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಾಗೂ ಪರಿಸರ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಅಭಿವೃದ್ಧಿ ಪತ್ರಿಕೋದ್ಯಮ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಲು 2001ರಲ್ಲಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿತು. ಅದರಂತೆ 2001ರಿಂದ 2016ರ ವರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಅರ್ಹ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ.



2017ನೇ ಸಾಲಿನಿಂದ 2023ನೇ ಸಾಲಿನವರೆಗೆ ಅರ್ಹ ಪತ್ರಕರ್ತರಿಗೆ ಈ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ.

ಪರಿಸರ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕ್ಷೇತ್ರಕ್ಕೆ ಅನುಪಮ ಕೊಡುಗೆ ನೀಡಿರುವ ಹಾಗೂ ಪತ್ರಿಕೋದ್ಯಮದಲ್ಲಿ ಕನಿಷ್ಠ 10 ವರ್ಷಗಳ ಅನುಭವ ಹೊಂದಿರುವ ಅರ್ಹ ಪತ್ರಕರ್ತರನ್ನು ಸಾರ್ವಜನಿಕರು, ಸಂಘ ಸಂಸ್ಥೆಗಳು ನಾಮನಿರ್ದೇಶನ ಮಾಡಬಹುದು ಅಥವಾ ವೈಯುಕ್ತಿಕವಾಗಿ ಸ್ವಯಂ ಅರ್ಜಿ ಸಲ್ಲಿಸಬಹುದು.

2017 ರಿಂದ 2023 ರ ಅವಧಿಯ ಎರಡೂ ವಿಭಾಗಗಳ ಪ್ರಶಸ್ತಿಗಳಿಗೆ ತಲಾ 7 ಅರ್ಹ ಪತ್ರಕರ್ತರನ್ನು ಆಯ್ಕೆ ಮಾಡಲಾಗುವುದು. ಈ ಪ್ರಶಸ್ತಿಯ ಮೊತ್ತ ಒಂದು ಲಕ್ಷ ರೂ. ನಗದು ಪುರಸ್ಕಾರ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಯನ್ನು ಹೊಂದಿರುತ್ತದೆ.

ಅರ್ಜಿಗಳು / ನಾಮನಿರ್ದೇಶನಗಳನ್ನು ಮಾನ್ಯ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು 560001 ಇಲ್ಲಿಗೆ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ ಇ-ಮೇಲ್ ವಿಳಾಸ tsraward@gmail.com ಗೆ ದಿನಾಂಕ:30-09-2024ರ ಸಂಜೆ 5.00 ಗಂಟೆಯ ಒಳಗಾಗಿ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


HAMPI TIMES
Print & Digital Ads
Book @ Economical rates
Hosapete-Vijayanagara Dist.
ನಂ.1 ನಿಮ್ಮೆಲ್ಲರ ದಿನಪತ್ರಿಕೆ
ಹಂಪಿ ಟೈಮ್ಸ್
ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ಅತ್ಯಧಿಕ ಓದುಗರನ್ನು ತಲುಪಿ
ಲೋಕಲ್ ಜಾಹೀರಾತು ಈಗ ವಿಶ್ವವ್ಯಾಪಿ

- Recruitment job
- Tender/Notice
- Change of name
- Matrimonial
- obituary (Death announcement)
- Businesses
- Education
- Property Real Estate
- Lost and found
- Marriage Bureau
- Remembrance
- Service
- Retail/shopping
- Personnel Announcement
- Computers and Hardware
- Astrology
- Loan /Finance
- Vehicle Automobiles
- Tours and Travels

Education is the most powerful weapon which you can use to change the world - Nelson Mandela

M:94486 33038
Visit Us www.hampitimes.com/epaper.hampitimes.com

ನಮ್ಮ ಶಾಲೆ ನಮ್ಮ ದೇಗುಲ: ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ತುಂಬುವ ಪವಿತ್ರ ಸ್ಥಳ, ಶಾಲೆಗಳ ಸ್ವಚ್ಛತೆ, ಸಂರಕ್ಷಣೆ ನಮ್ಮೆಲ್ಲರ ಹೊಣೆ. ಬನ್ನಿ ಕೈಜೋಡಿಸಿ...